45	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಮರಗುಂದಾ	ಬೀದರ್

ತುಮಕೂರು ಜಿಲ್ಲೆ

46	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ರಂಟಿಹೊಳಲು	ಮಧುಗಿರಿ
47	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಗುರುವಾಪುರ	ಚಿಕ್ಕನಾಯಕನಹಳ್ಳಿ
48	ಸರ್ಕಾರಿ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿ ನಿಲಯ, ತುಮಕೂರು	ತುಮಕೂರು
49	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಶಾಮರಾಯನಪಾಳ್ಯ	ಪಾವಗಡ
50	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ತಾವರೇಕೆರೆ	ಶಿರಾ

589 (780) ಶ್ರೀ ಹಾಲಪ್ಪ ಹೆಚ್ (ಹೊಸನಗರ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಮಂಜೂರು ಮಾಡಲು ಸರ್ಕಾರ ನಿಗದಿಪಡಿಸಿದ ಜಮೀನಿನ ವಿಸ್ತೀರ್ಣವೆಷ್ಟು?

ಆ) ಅತೀ ಕಡಿಮೆ ಜಮೀನು ಇರುವ ರೈತರಿಗೆ ಬಾವಿಯನ್ನು ಮಂಜೂರು ಮಾಡಲು ಯಾವುದಾದರೊಂದು ಯೋಜನೆಯನ್ನು ರೂಪಿಸಲಾಗುವುದೆ?

ಇ) ಈ ಬಗ್ಗೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆಬಾವಿ ಮಂಜೂರು ಮಾಡಲು ಫಲಾನುಭವಿಯು ಸಣ್ಣ ರೈತರಾಗಿದ್ದು, ಕನಿಷ್ಟ 2 ಎಕರೆ ಹಾಗೂ ಗರಿಷ್ಟ 5 ಎಕರೆ ಖುಷ್ಕಿ ಜಮೀನನ್ನು ಹೊಂದಿರಬೇಕು ಮತ್ತು ಬರಪೀಡಿತ ಪ್ರದೇಶ (DPAP)

ಗಳಲ್ಲಿ ಫಲಾನುಭವಿಯು 2 ಎಕರೆಯಿಂದ ಗರಿಷ್ಟ 7 5 ಎಕರೆವರೆಗೆ ಖುಷ್ಕಿ ಜಮೀನು ಹೊಂದಿರಬಹುದಾಗಿರುತ್ತದೆ

ಆ) ಕನಿಷ್ಟ 2 ಎಕರೆಗಿಂತ ಕಡಿಮೆ ಜಮೀನು ಹೊಂದಿರುವ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಒತ್ತಟ್ಟಿಗೆ ಕನಿಷ್ಟ 8 ಎಕರೆಯಿಂದ ಗರಿಷ್ಟ 15 ಎಕರೆವರೆಗೆ ಖುಷ್ಕಿ ಜಮೀನು ಹೊಂದಿರುವ ಫಲಾಪೇಕ್ಷಿಗಳಿಗೆ ಗಂಗಾ ಕಲ್ಯಾಣ ಸಾಮೂಹಿಕ ನೀರಾವರಿ ಕೊಳವೆಬಾವಿ ಯೋಜನೆಯಡಿ ನೀರಾವರಿ ಸೌಲಭ್ಯವನ್ನು ಕಲ್ಪಿಸಲು ಯೋಜನೆಯನ್ನು ರೂಪಿಸಲಾಗಿದೆ

ಇ) ಈ ಬಗ್ಗೆ ನಿಗಮವು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಒತ್ತಟ್ಟಿಗೆ ಜಮೀನು ಹೊಂದಿರುವ ಫಲಾಪೇಕ್ಷಿಗಳಿಗೆ ಗಂಗಾ ಕಲ್ಯಾಣ ಸಾಮೂಹಿಕ ನೀರಾವರಿ ಕೊಳವೆಬಾವಿ ಯೋಜನೆಯಡಿ ನೀರಾವರಿ ಸೌಲಭ್ಯವನ್ನು ಒದಗಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ

590 (967) ಶ್ರೀ ಹಾಲಪ್ಪ ಹೆಚ್. (ಹೊಸನಗರ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸನಗರ ವಿಧಾನ ಸಭಾ ಕ್ಷೇತ್ರದಲ್ಲಿ ಪ್ರಾಥಮಿಕ ಪಶು ಚಿಕಿತ್ಸಾಲಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಪಶು ಚಿಕಿತ್ಸಾಲಯಗಳನ್ನು ತೆರೆಯಲು ಸರ್ಕಾರ ಕೈಗೊಂಡ ಕ್ರಮವೇನು?

ಇ) ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಈ) ಹಾಗಿದ್ದಲ್ಲಿ, ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮವೇನು?(ವಿವರ ನೀಡುವುದು)

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ಹೌದು ಬಂದಿದೆ, ಹೊಸನಗರ ವಿಧಾನ ಸಭಾ ಕ್ಷೇತ್ರದಲ್ಲಿ 1 ಪಶು ಚಿಕಿತ್ಸಾಲಯ ಕೊರತೆ ಸರ್ಕಾರದ ಗಮನಕ್ಕೆ ಬಂದಿದೆ

ಆ) ಡಾ ಡಿ ಎಂ ನಂಜುಂಡಪ್ಪ ರವರ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ವರದಿಯಂತೆ ಹೊಸನಗರ ಮುಂದುವರಿದ ತಾಲ್ಲೂಕು